## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ (ರೂ.1.00 ಲಕ್ಷ ಸಹಾಯಧನ)ಯಡಿ ಹೊರಡಿಸಿರುವ ಸರ್ಕಾರದ ಆದೇಶವನ್ನು ತಿದ್ದುಪಡಿ ಮಾಡುವ ಬಗ್ಗೆ.

**ಓದಲಾದ:-**
1. ಸರ್ಕಾರದ ಆದೇಶ ಸಂಖ್ಯೆ:ಸಕಇ 255 ಎಸ್.ಡಿ.ಸಿ 2023, ದಿನಾಂಕ:21.09.2023.
2. ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ:ಅಂಅನಿ/ಕೈ-ತ/ನಿಮಂಸಭೆ-238 /2024-25/ 3801, ದಿನಾಂಕ:23.09.2024.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶದಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿಗಳಿಗೆ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ವಾಣಿಜ್ಯ ಬ್ಯಾಂಕ್ ಗಳಿಂದ ಪಡೆಯುವ ಸಾಲಕ್ಕೆ ಗರಿಷ್ಟ ಶೇ. 20ರಷ್ಟು ಅಥವಾ ಒಂದು ಲಕ್ಷ ರೂ.ಗಳು ಮೀರದಂತೆ ಸಾಲ ಸಹಾಯಧನ ನೀಡುವ ಕಾರ್ಯಕ್ರಮವನ್ನು ಆಯವ್ಯಯ ಸಲಹಾ ಪಟ್ಟಿಯಲ್ಲಿ ತಿಳಿಸಿರುವಂತೆ ಪ್ರಸಕ್ತ ಸಾಲಿಗೆ ನಿಗಮಗಳಿಗೆ ಒದಗಿಸಿರುವ ಅನುದಾನಕ್ಕೆ ಸೀಮಿತವಾಗಿ ಚಾಲ್ತಿಯಲ್ಲಿರುವ Deligation of Financial power ರಂತೆ ಜಾರಿಗೊಳಿಸುವ ಹಾಗೂ ಮಾರ್ಗಸೂಚಿಯನ್ವಯ ನಿಯಾಮಾನುಸಾರವಾಗಿ ಹಾಗೂ ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮಾಂಕ (2)ರ ವ್ಯವಸ್ಥಾಪಕ ನಿರ್ದೇಶಕರು ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆಯಲ್ಲಿ ದಿನಾಂಕ:06.09.2024 ರಂದು ನಡೆದ ಜಿಲ್ಲಾ ವ್ಯವಸ್ಥಾಪಕರು ಹಾಗೂ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಮಯದಲ್ಲಿ ಈ ಯೋಜನೆಯಡಿ ಸರ್ಕಾರಿ ಆದೇಶದಲ್ಲಿರುವಂತೆ ಬ್ಯಾಂಕ್ ಗಳು ಮಂಜೂರು ಮಾಡುವ ಸಾಲದ ಮೊತ್ತಕ್ಕೆ ಶೇಕಡ 20ರಷ್ಟು ಗರಿಷ್ಟ ರೂ.1.00 ಲಕ್ಷ ಸಹಾಯಧನ ಮಂಜೂರು ಮಾಡುವಂತೆ ಸರ್ಕಾರದಿಂದ ಆದೇಶವಾಗಿರುವುದರಿಂದ ಅರ್ಹ ಫಲಾನುಭವಿಗಳಿಗೆ ನಿಗಮದಿಂದ ಗರಿಷ್ಟ ರೂ.1.00 ಲಕ್ಷಗಳ ಸಹಾಯಧನ ಮಂಜೂರು ಮಾಡಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿರುತ್ತಾರೆ.

ಉದಾಹರಣೆಗೆ ಒಬ್ಬ ಅರ್ಹ ಫಲಾನುಭವಿ ಈ ಯೋಜನೆಯಡಿ ಗರಿಷ್ಟ 1.00 ಲಕ್ಷಗಳ ಸಹಾಯಧನ ಪಡೆಯಬೇಕಾದಲ್ಲಿ ಕನಿಷ್ಟ ರೂ.5.00 ಲಕ್ಷಗಳ ಬ್ಯಾಂಕ್ ಸಾಲ ಮಂಜೂರು ಮಾಡಿಸಿಕೊಳ್ಳಬೇಕಾಗುತ್ತದೆ. ಸದ್ಯದ ಪರಿಸ್ಥಿತಿಯಲ್ಲಿ ನಿಗಮದ ಫಲಾನುಭವಿಗಳಿಗೆ ಸಣ್ಣ ಪ್ರಮಾಣದ ವ್ಯಾಪಾರ ವಹಿವಾಟು ಮಾಡಲು ಬ್ಯಾಂಕ್ ಗಳ ವತಿಯಿಂದ ಹೆಚ್ಚಿನ ಮೊತ್ತದ ಸಾಲ ಮಂಜೂರು ಮಾಡಲು ಕ್ಲಿಷ್ಟಕರವಾಗಿರುವ ಕಾರಣ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗುತ್ತಿಲ್ಲವೆಂದು ಕ್ಷೇತ್ರ ಮಟ್ಟದ ಅಧಿಕಾರಿಗಳು ತಿಳಿಸಿರುವುದಾಗಿ ತಿಳಿಸಿದ್ದಾರೆ.

S.V
21/12/2024

ಆದ್ದರಿಂದ, ಬ್ಯಾಂಕ್ ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಬೇಕಾದ ಯೋಜನೆಗಳಲ್ಲಿ ಈ ಹಿಂದೆ ಸರ್ಕಾರದ ಆದೇಶಗಳಲ್ಲಿರುವಂತೆ ಘಟಕ ವೆಚ್ಚದ ಶೇಕಡ 70 ರಷ್ಟು ಅಥವಾ ಗರಿಷ್ಠ ರೂ.1.00 ಲಕ್ಷ ಸಹಾಯಧನ ಮಂಜೂರು ಮಾಡುವಂತೆ ಸರ್ಕಾರದ ಆದೇಶವನ್ನು ತಿದ್ದುಪಡಿ ಮಾಡಿದಲ್ಲಿ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾವಂತ ನಿರುದ್ಯೋಗಿ ಯುವಕ/ಯುವತಿಯರಿಗೆ ಅನುಕೂಲವಾಗುವುದೆಂದು ಹಾಗೂ ಸದರಿ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆಂದು ಎಲ್ಲಾ ಜಿಲ್ಲಾ ಮಟ್ಟದ ಅನುಷ್ಠಾನಾಧಿಕಾರಿಗಳು ಲಿಖಿತವಾಗಿ/ಮೌಖಿಕವಾಗಿ ತಿಳಿಸಿರುವುದರಿಂದ ಸದರಿ ಸರ್ಕಾರಿ ಆದೇಶವನ್ನು ತಿದ್ದುಪಡಿ ಮಾಡಿ ಸೂಕ್ತ ಮಾರ್ಪಾಡು ಆದೇಶ ಹೊರಡಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ವಿವರಿಸಲಾದ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಸಕಇ 255 ಎಸ್‌ಡಿಸಿ 2023,**
**ಬೆಂಗಳೂರು, ದಿನಾಂಕ:21.12.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಪರಿಶಿಷ್ಟ ಜಾತಿ ನಿರುದ್ಯೋಗಿಗಳಿಗೆ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ವಾಣಿಜ್ಯ ಬ್ಯಾಂಕ್ ಗಳಿಂದ ಪಡೆಯುವ ಸಾಲಕ್ಕೆ ಗರಿಷ್ಠ ಶೇಕಡ 20 ರಷ್ಟು ಅಥವಾ ರೂ.1.00 ಲಕ್ಷಗಳು ಎಂಬುದನ್ನು ತಿದ್ದುಪಡಿ ಮಾಡಿ ಅದನ್ನು ಘಟಕ ವೆಚ್ಚದ ಶೇಕಡ 70 ರಷ್ಟು ಅಥವಾ ಗರಿಷ್ಠ ರೂ. 1.00 ಲಕ್ಷ ಎಂದು ಮಾರ್ಪಡಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 673 ವೆಚ್ಚ-3/2023, ದಿನಾಂಕ:04.12.2024ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S.V
(ಎಸ್.ವಿ ಕಲಾವತಿ) 21/12/2024
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.
21/12/24

**ಇವರಿಗೆ:**

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.

7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಪರಿಶಿಷ್ಟ ಜಾರಿ/ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು.
9. ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಮಾಹಿತಿ ವಿಭಾಗ (ಪಿಎಂಐ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**<u>ಪ್ರತಿ ಮಾಹಿತಿಗಾಗಿ:-</u>**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.